ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 23ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾರನೇ ಪಟ್ಟಿ

3. ವರದಿಯನ್ನೊಪ್ಪಿಸುವುದು

ಶ್ರೀ ಜಿ. ಸೋಮಶೇಖರ ರೆಡ್ಡಿ (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 33ನೇ ವರದಿಯನ್ನೊಪ್ಪಿಸುವುದು.

4. ವಿತ್ತೀಯ ಕಾರ್ಯಕಲಾಪಗಳು

1) **ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) ಅವರು** : 2020-21ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮಂಡಿಸುವುದು.

2) 2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ (ಆರನೇ ದಿನ)

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಚರ್ಚೆ.

... 2/ ..

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸೊಸೈಟಿಗಳ ನೋಂದಣಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಎಸ್. ಅಂಗಾರ (ಮಾನ್ಯ ಮೀನುಗಾರಿಕೆ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಅಧಿಕೃತ ನಿರ್ಣಯ

ಶ್ರೀ ಬಿ. ಶ್ರೀರಾಮುಲು (ಸಮಾಜ ಕಲ್ಯಾಣ ಸಚಿವರು) ಅವರು ಈ ಕೆಳಕಂಡ ಅಧಿಕೃತ ನಿರ್ಣಯವನ್ನು ಮಂಡಿಸುವುದು :–

"ಭಾರತ ಸಂವಿಧಾನದ 252ನೇ ಅನುಚ್ಛೇದದ ಅಡಿಯಲ್ಲಿ ಸಂಸತ್ತು ಅಧಿನಿಯಮಿಸಿದ ಮತ್ತು ತದನಂತರ ಕರ್ನಾಟಕ ರಾಜ್ಯವು ಅಳವಡಿಸಿಕೊಂಡ ದಿ ಎಂಪ್ಲಾಯ್‌ಮೆಂಟ್ ಆಫ್ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಅಂಡ್ ಕನ್‌ಸ್ಟ್ರಕ್ಷನ್ ಆಫ್ ಡ್ರೈ ಲ್ಯಾಟ್ರೈನ್ಸ್ (ಪ್ರೋಹಿಬಿಷನ್) ಆಕ್ಟ್, 1993 (1993ರ ಕೇಂದ್ರ ಅಧಿನಿಯಮ 46), ದಿ ಪ್ರೋಹಿಬಿಷನ್ ಆಫ್ ಎಂಪ್ಲಾಯ್‌ಮೆಂಟ್ ಆಫ್ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಅಂಡ್ ದೇರ್ ರಿಹಾಬಿಲಿಟೇಷನ್ ಆಕ್ಟ್, 2013ನ್ನು (2013 ರ ಕೇಂದ್ರ ಅಧಿನಿಯಮ 25) ಅಧಿನಿಯಮಿಸಿದ ತರುವಾಯ ಅನಗತ್ಯಗೊಂಡಿರುವುದರಿಂದ, ದಿ ಎಂಪ್ಲಾಯ್‌ಮೆಂಟ್ ಆಫ್ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಅಂಡ್ ಕನ್‌ಸ್ಟ್ರಕ್ಷನ್ ಆಫ್ ಡ್ರೈ ಲ್ಯಾಟ್ರೈನ್ಸ್ (ಪ್ರೋಹಿಬಿಷನ್) ಆಕ್ಟ್, 1993 (1993ರ ಕೇಂದ್ರ ಅಧಿನಿಯಮ 46), ಅನ್ನು ನಿರಸನಗೊಳಿಸಲು ಈ ಸದನವು ಅಂಗೀಕರಿಸುತ್ತದೆ".

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ರಾಜಶೇಖರ ಬಸವರಾಜ ಪಾಟೀಲ್, ಎನ್.ಹೆಚ್. ಶಿವಶಂಕರ ರೆಡ್ಡಿ, ಪಿ.ಟಿ. ಪರಮೇಶ್ವರ್ ನಾಯ್ಕ ಹಾಗೂ ಇತರರು** – ರಾಜ್ಯದಲ್ಲಿ ಪದೇ–ಪದೇ ಗಣಿ ಸಂಬಂಧಿಸಿದ ಸ್ಫೋಟಗಳು ಸಂಭವಿಸುತ್ತಿರುವುದರಿಂದ ಅಮಾಯಕರು ಮರಣ ಹೊಂದುತ್ತಿದ್ದು, ಅಪಾರ ಪ್ರಮಾಣದ ಆಸ್ತಿ ಪಾಸ್ತಿಗಳಿಗೆ ಹಾನಿ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

3) **ಶ್ರೀಯುತರುಗಳಾದ ಕೆ.ಆರ್. ರಮೇಶ್ ಕುಮಾರ್, ವಿ. ಮುನಿಯಪ್ಪ, ಎನ್.ಹೆಚ್. ಶಿವಶಂಕರ ರೆಡ್ಡಿ, ಕೆ.ವೈ. ನಂಜೇಗೌಡ, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಅವರುಗಳು** – ಕೋಲಾರ ಜಿಲ್ಲೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಎಂ.ವಿ.ಕೆ. ಗೋಲ್ಡನ್ ಡೈರಿ ಕಾರ್ಯದ ವಿಳಂಬದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

8. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಇವರು** – "ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ ಯೋಜನೆ ಎರಡನೇ ಹಂತದ ಕಳಪೆ ಕಾಮಗಾರಿ" ಕುರಿತು ದಿನಾಂಕ:09.03.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಎ.ಟಿ. ರಾಮಸ್ವಾಮಿ ಇವರು** – "ರಾಜ್ಯದಲ್ಲಿನ ಕುಡಿಯುವ ನೀರಿನ ಸಮಸ್ಯೆ" ಕುರಿತು ದಿನಾಂಕ:15.03.2021ರಂದು ಶೂನ್ಯವೇಳೆಯಡಿ ಪ್ರಸ್ತಾಪಿಸಿರುವುದಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3) **ಶ್ರೀ ಬಂಡೆಪ್ಪ ಕಾಶೆಂಪೂರ್ ಇವರು** – "ವಿದ್ಯುತ್ ಸಂಪರ್ಕ" ಕುರಿತು ದಿನಾಂಕ:09.03.2021ರಂದು ಏಳನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 94(1231)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4) **ಶ್ರೀಮತಿ ರೂಪಕಲಾ ಎಂ. ಇವರು** – ಕೋಲಾರ ಜಿಲ್ಲೆಯ ಕೆ.ಜಿ.ಎಫ್. ನಲ್ಲಿ "ನಿರುಪಯುಕ್ತ ಜಮೀನನ್ನು ಸ್ವಾಧೀನಪಡಿಸಿಕೊಂಡು ಕೈಗಾರಿಕೆಗಳನ್ನು ಸ್ಥಾಪಿಸುವುದು" ಎಂಬ ವಿಷಯದ ಕುರಿತು ದಿನಾಂಕ:19.03.2021 ರಂದು ಹದಿನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 200(3267)ಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

9. ಗಮನ ಸೆಳೆಯುವ ಸೂಚನೆಗಳು

1) **ಡಾ. ಕೆ. ಅನ್ನದಾನಿ ಅವರು** – ಮಂಡ್ಯ ಜಿಲ್ಲೆಯ ಮಳವಳ್ಳಿ ವಿಧಾನಸಭಾ ಕ್ಷೇತ್ರದ ಕಿರುಗಾವಲು ಹೋಬಳಿ ತಳಗವಾದಿ ಗ್ರಾಮ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ನಡೆದಿರುವ ಕೋಟ್ಯಾಂತರ ರೂಪಾಯಿಗಳ ಅಕ್ರಮದ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

2) **ಶ್ರೀ ಹೆಚ್.ಕೆ. ಪಾಟೀಲ್ ಅವರು** – ರಾಜ್ಯದ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ನಿಯೋಜನೆ ಮೇರೆಗೆ ಸಹಾಯಕ ಪ್ರಾಧ್ಯಾಪಕರೆಂದು ಕರ್ತವ್ಯನಿರ್ವಹಿಸುತ್ತಿರುವ ಪಶುವೈದ್ಯಾಧಿಕಾರಿಗಳ ವಿಲೀನಾತಿ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಸಿ.ಎಂ. ನಿಂಬಣ್ಣವರ್ ಅವರು** – ರೈತರಿಗೆ ರಿಯಾಯಿತಿ ದರದಲ್ಲಿ ಪೂರೈಸುವ ಸ್ಪಿಂಕಲರ್ ಸೆಟ್‌ನ್ನು ಮೂರು ವರ್ಷಕ್ಕೊಮ್ಮೆ ಪೂರೈಸಲು ಕಿಸಾನ್ ಸಾಫ್ಟ್‌ವೇರ್‌ನಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ರಾಜ್ಯದಲ್ಲಿನ ಖನಿಜ ಸಂಪತ್ತುಗಳಿಂದ ಬರಬೇಕಾದ ಆದಾಯದಲ್ಲಿ ಅಕ್ರಮ ವ್ಯವಹಾರಗಳಿಂದ ವಂಚನೆಯಾಗುತ್ತಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರ ಗಮನ ಸೆಳೆಯುವುದು.

... 5/ ..

5) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ರಾಜ್ಯದಲ್ಲಿ ರೇಷ್ಮೆಹುಳು ಸಾಕಾಣಿಕೆ ಉಪಕರಣಗಳ ಖರೀದಿ ಹಾಗೂ ಹುಳುಗಳ ಸಾಕಾಣಿಕೆ ಮನೆಗಳ ನಿರ್ಮಾಣಕ್ಕೆ ರೇಷ್ಮೆ ಬೆಳೆಗಾರರಿಗೆ ಸಹಾಯಧನ ನೀಡುವ ಬಗ್ಗೆ ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

6) **ಶ್ರೀ ಆಚಾರ್ ಹಾಲಪ್ಪ ಬಸಪ್ಪ ಅವರು** – ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾದ ಕುಕನೂರು ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕೆ ಚಾಲನೆ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು** – ನಗರ ಪ್ರದೇಶಗಳಲ್ಲಿ ರಚನೆಗೊಂಡಿರುವ ಸ್ಥಳೀಯ ಪ್ರಾಧಿಕಾರಗಳ ಆಡಳಿತ ವ್ಯಾಪ್ತಿಯಲ್ಲಿ ಇತರೆ ರಾಜ್ಯಗಳ ಮಾದರಿಯಲ್ಲಿಯೇ ಟಿ.ಪಿ. ಸ್ಕೀಮ್ಸ್ ಮಾಡಲು ನಿಯಮಾವಳಿ ತಿದ್ದುಪಡಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8) **ಶ್ರೀ ಯಶವಂತರಾಯ ವಿಠ್ಠಲಗೌಡ ಪಾಟೀಲ್ ಅವರು** – ವಿಜಯಪುರ ಜಿಲ್ಲೆ ಇಂಡಿ ಪಟ್ಟಣದಲ್ಲಿ ನಿರ್ಮಿಸಲಾಗಿರುವ ಮಿನಿ ವಿಧಾನಸೌಧದಲ್ಲಿ ಲಿಫ್ಟ್ ಯಂತ್ರ ಇಲ್ಲದೇ, ಸ್ವಚ್ಛತೆ ಮತ್ತು ನಿರ್ವಹಣೆ ಕೊರತೆಯಿಂದ ಸಾರ್ವಜನಿಕರಿಗೆ ಹಾಗೂ ಸಿಬ್ಬಂದಿಗಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ ಅವರು** – ವಿವಿಧ ಅಲೆಮಾರಿ ಸಮುದಾಯದ ಬಡವರು ಮನೆ ನಿರ್ಮಾಣ ಮಾಡಲು ಹಣ ಮಂಜೂರು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10) **ಶ್ರೀ ಈ. ತುಕಾರಾಂ ಅವರು** – ಸಂಡೂರು ಪಟ್ಟಣದಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಂದ ಬಡ ಮತ್ತು ಕಾರ್ಮಿಕ ಕುಟುಂಬಗಳು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

11) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಅತಿವೃಷ್ಟಿಯಿಂದಾಗಿ ಒಡೆದಿರುವ ಕಾಲುವೆಗಳನ್ನು ದುರಸ್ತಿಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

12) **ಶ್ರೀ ಆರಗ ಜ್ಞಾನೇಂದ್ರ ಅವರು** – ಟೊಯೋಟಾ ಕಂಪನಿಯ ಕಾರಿನ ಟೈರ್‌ಗಳು ಒಡೆಯುತ್ತಿದ್ದು, ಇದರಿಂದ ಅಪಘಾತಗಳು ಸಂಭವಿಸುತ್ತಿರುವುದರಿಂದ ಕಂಪನಿಯ ಮೇಲೆ ಕ್ರಮ ಕೈಗೊಳ್ಳಲು ಹಾಗೂ ಸದರಿ ಕಾರುಗಳನ್ನು ಖರೀದಿ ಮಾಡದಂತೆ ಎಲ್ಲಾ ಇಲಾಖೆಗಳಿಗೆ ಆದೇಶಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಸಾರಿಗೆ) ಗಮನ ಸೆಳೆಯುವುದು.

13) **ಶ್ರೀ ಎಂ. ಚಂದ್ರಪ್ಪ ಅವರು** – ಬೆಂಗಳೂರು ನಗರದಲ್ಲಿ ರಾಜಕಾಲುವೆಗಳಿಗೆ ಅಡ್ಡಲಾಗಿ ನಿರ್ಮಾಣ ಮಾಡಿರುವ ಗೋಡೆಗಳನ್ನು ತೆರವುಗೊಳಿಸಲು ಹಾಗೂ ಸಂಬಂಧಪಟ್ಟವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm